# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 28 | Pages. 2 | Date: 25-12-2025, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 28 – ಪುಟಗಳು : 2 | 25-12-2025 | ಗುರುವಾರ | Ph: 8762954248 | ದರ : ₹1


# ಬಾಲ್ಯ ವಿವಾಹ: ಹಾಸನ ಜಿಲ್ಲೆಗೆ 4ನೇ ಸ್ಥಾನ

## ಮಕ್ಕಳ ಕಾನೂನು ಪಾಲನೆಯಾಗಲಿ | ನ್ಯಾಯಾಧೀಶೆ ದಾಕ್ಷಾಯಿಣಿ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**




ಹಾಸನ: ಪೊಲೀಸ್ ಅಧಿಕಾರಿಗಳು ಮಕ್ಕಳ ಕಾನೂನುಗಳನ್ನು ಸರಿಯಾದ ಸ್ವರೂಪದಲ್ಲಿ ಅರ್ಥ ಮಾಡಿಕೊಂಡು ಕಾನೂನು ಅನುಷ್ಠಾನ ಮಾಡಬೇಕು. ಬಾಲ್ಯ ವಿವಾಹ ಪ್ರಕರಣಗಳಲ್ಲಿ ಜಿಲ್ಲೆ 4ನೇ ಸ್ಥಾನದಲ್ಲಿರುವುದು ಆತಂಕದ ವಿಷಯ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯೂತ್ ಹಾಸ್ಟೆಲ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ ಮತ್ತು ಮಕ್ಕಳ ರಕ್ಷಣಾ ಘಟಕದಿಂದ ಆಯೋಜಿಸಿದ್ದ ಬಾಲ್ಯ ವಿವಾಹ ನಿಷೇಧ, ಪೋಕ್ಸೊ, ಬಾಲ ನ್ಯಾಯ ಕಾಯ್ದೆ ಕುರಿತು ಆಯೋಜಿಸಿದ್ದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳನ್ನು ಹೆಚ್ಚು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಅವರ ಯೋಗ್ಯತೆ, ಅಸಹಾಯಕತೆಯನ್ನು ಸಮಾಜದ ದುಷ್ಟ ಶಕ್ತಿಗಳು ದುರ್ಬಳಕೆ ಮಾಡಿಕೊಂಡು ಅವರಿಂದ ತಪ್ಪು ಮಾಡಿಸುವುದು, ಮಕ್ಕಳ ಹಕ್ಕುಗಳ ಉಲ್ಲಂಘನೆ ಮಕ್ಕಳ ಮೇಲೆ ದೈಹಿಕ, ಲೈಂಗಿಕ ಸ್ವರೂಪದ ಹಿಂಸೆ, ದೌರ್ಜನ್ಯ ಎಸಗುತ್ತಿದ್ದಾರೆ. ಅದನ್ನು ತಡೆಯಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆ ಬಾಲ್ಯ ವಿವಾಹ ಪ್ರಕರಣಗಳಲ್ಲಿ 4ನೇ ಸ್ಥಾನದಲ್ಲಿದೆ. ಇದು ನಮಗೆ ತುಂಬ ಅವಮಾನಕರ ಸಂಗತಿಯಾಗಿದೆ. ಆದ್ದರಿಂದ ಪೊಲೀಸ್ ಠಾಣೆಯ ಅಧಿಕಾರಿಗಳು ಬಾಲ್ಯ ವಿವಾಹ ತಪ್ಪಿಗೆ ಆರಂಭದಲ್ಲಿ ಅರಿವು ಮೂಡಿಸಲು ಕಾರ್ಯ ನಿರ್ವಹಿಸಬೇಕಿದೆ. ಒಂದು ವೇಳೆ ವಿವಾಹಗಳು ನಡೆದಿರುವುದು ಕಂಡುಬಂದರೆ ತಕ್ಷಣ ಕಾನೂನು ಕ್ರಮ ತೆಗೆದುಕೊಂಡು ಅಂತಹ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ನಡೆಯದಂತೆ ತಡೆಯಬಹುದಾಗಿದೆ. ಅದರಿಂದ ಹೆಣ್ಣು ಮಕ್ಕಳು ಬಾಲ ಗರ್ಭಿಣಿಯಾಗುವುದನ್ನು ತಡೆಯಬಹುದು. ಎಲ್ಲಾ ಅಧಿಕಾರಿಗಳು ಬಾಲ್ಯ ವಿವಾಹ ತಡೆಯಲು ಕ್ರಮ ವಹಿಸಬೇಕಾಗಿದೆ ಎಂದು ತಿಳಿಸಿದರು.

ಬಾಲ್ಯ ವಿವಾಹ ನಿಷೇಧ ಕರ್ನಾಟಕ ತಿದ್ದುಪಡಿ ಕಾಯ್ದೆಯನ್ವಯ ಪೊಲೀಸ್ ಅಧಿಕಾರಿಗಳಿಗೆ ಸುಮೊಟೊ ಪ್ರಕರಣ ದಾಖಲಿಸಲು ಅವಕಾಶ ನೀಡಿದ್ದು ಅದನ್ನು ಪರಿಣಾಮಕಾರಿಯಾಗಿ ಬಳಕೆ ಮಾಡಬೇಕು ಎಂದರು.

ಬಾಲ್ಯ ವಿವಾಹ ಕಾಯ್ದೆಯ ಪ್ರಕಾರ ಬಾಲ್ಯ ವಿವಾಹಗಳನ್ನು ತಡೆಗಟ್ಟುವುದು, ಒಂದು ವೇಳೆ ವಿವಾಹವಾಗುತ್ತಿದ್ದರೆ ಸಂರಕ್ಷಿಸುವುದು, ಒಂದು ವೇಳೆ ವಿವಾಹ ಅಥವಾ ವಿವಾಹ ಪೂರ್ವ ಕಾರ್ಯ ನಡೆದಿದ್ದರೆ ಕಾನೂನು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆಯನ್ವಯ ನ್ಯಾಯಲಯದಲ್ಲಿ ಪ್ರತಿಬಂಧಕಾಜ್ಞೆ ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಹಾಗಾಗಿ ಅಧಿಕಾರಿಗಳು ಅದನ್ನು ಸದ್ಬಳಕೆ ಮಾಡಿಕೊಂಡು ಪ್ರಕರಣ ತಡೆಯಲು ಕಾರ್ಯಪ್ರವೃತ್ತರಾಗಿರಿ ಎಂದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ ಮಾತನಾಡಿ, ಮಕ್ಕಳ ಪ್ರಕರಣಗಳು ಬಹಳ ಸೂಕ್ಷ್ಮ. ಪೋಷಕರು ಮಕ್ಕಳಿಗೆ ಏನಾದರು ತೊಂದರೆಯಾದರೆ ಬಹಳ ಆತಂಕಕ್ಕೆ ಒಳಗಾಗುತ್ತಾರೆ. ಹಾಗಾಗಿ ಬಾಲ್ಯ ವಿವಾಹ, ಪೋಕ್ಸೋ ಇನ್ನಿತರ ಯಾವುದೇ ಮಕ್ಕಳ ಪ್ರಕರಣ ಬಂದ ಕೂಡಲೇ ದೂರು ದಾಖಲಿಸಬೇಕು ಎಂದು ತಿಳಿಸಿದರು.

ಮಕ್ಕಳು ಕಾಣೆಯಾದ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಪತ್ತೆಗೆ ಕ್ರಮ ವಹಿಸಬೇಕಿದೆ. ಇಲ್ಲದಿದ್ದರೆ ಅವರ ದುರ್ಬಳಕೆ ಇನ್ನಿತರೆ ಸಮಸ್ಯೆಗೆ ಮಕ್ಕಳು ಒಳಗಾಗಬಹುದು. ಅದರಿಂದ ಪೋಷಕರು ಒತ್ತಡಕ್ಕೆ ಒಳಗಾಗುತ್ತಾರೆ ಎಂದರು.

### ಗ್ರಾಪಂ ಜವಾಬ್ದಾರಿ ಹೆಚ್ಚು

**ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಚಂದ್ರಮೌಳಿ ಮಾತನಾಡಿ, ಅರಿವು ಕಾರ್ಯಕ್ರಮಗಳಲ್ಲಿ ಗ್ರಾಮ ಪಂಚಾಯಿತಿಗಳನ್ನು ಸೇರಿಸಿಕೊಳ್ಳಬೇಕು. ಈಗ ಮಕ್ಕಳ ವಿಶೇಷ ಗ್ರಾಮ ಸಭೆಗಳು ನಡೆಯುತ್ತಿವೆ. ಅದರಲ್ಲಿ ಪೊಲೀಸ್ ಅಧಿಕಾರಿಗಳು ಭಾಗವಹಿಸಿ ಬಾಲ್ಯ ವಿವಾಹ, ಪೋಕ್ಸೋ ಮತ್ತು ಬಾಲ ಗರ್ಭಿಣಿ ತಡೆಗೆ ಅರಿವು ಮೂಡಿಸಬೇಕು ಎಂದರು.**

**ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಮಧುಕುಮಾರಿ ವಹಿಸಿದ್ದರು. ಡಿವೈಎಸ್‌ಪಿ ಗಂಗಾಧರಪ್ಪ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ. ದಿಲೀಪ್ ಇತರರಿದ್ದರು.**

# ಸ್ಕಾಲರ್ಸ್ ಶಾಲೆಯಲ್ಲಿ ರಸ್ತೆ ಸುರಕ್ಷತೆ ಅರಿವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**




ಹಾಸನ: ನಗರದ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ರಸ್ತೆ ಸುರಕ್ಷತೆ ಕುರಿತು ಶ್ರೀ ಹೋಂಡಾ ಕಂಪನಿ ವತಿಯಿಂದ ಮಕ್ಕಳಿಗೆ ಅರಿವು ಮೂಡಿಸಲಾಯಿತು.

ಪಾದಚಾರಿ ಮಾರ್ಗ, ಚಾಲಕರು, ಪ್ರಯಾಣಿಕರು ಮತ್ತು ಮಕ್ಕಳು ಅಪಘಾತಗಳಿಂದ ರಕ್ಷಿಸಿಕೊಳ್ಳಲು ಅನುಸರಿಸಬೇಕಾದ ಕ್ರಮಗಳು, ಜಾಗರೂಕತೆಯಿಂದ ರಸ್ತೆ ದಾಟದೆ ಇದ್ದರೆ ಆಗುವ ಅನಾಹುತ, ಸಂಚಾರ ನಿಯಮ ಪಾಲನೆ, ವಾಹನ ಚಾಲನೆಯಲ್ಲಿ ಎಚ್ಚರಿಕೆ, ರಸ್ತೆ ಗುರುತುಗಳ ಬಗ್ಗೆ ತಿಳಿವಳಿಕೆ, ರಸ್ತೆಗಳಲ್ಲಿ ಮಕ್ಕಳು ಆಟವಾಡುವುದರಿಂದ ಆಗುವ ಪರಿಣಾಮ, ರಸ್ತೆ ದಾಟಲು ಇರುವ ಜೀಬ್ರಾ ಕ್ರಾಸಿಂಗ್‌ನ ಉಪಯೋಗ, ರಸ್ತೆಗಳಲ್ಲಿ ವ್ಹೀಲಿಂಗ್ ಮಾಡಿದರೆ, ರಸ್ತೆ ನಿಯಮಗಳನ್ನು ಪಾಲಿಸದಿದ್ದರೆ ಕೈಗೊಳ್ಳುವ ಕಾನೂನು ಕ್ರಮ ಹಾಗೂ ಪಾದಚಾರಿಗಳ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸಿದರು. ಮಕ್ಕಳಿಗೆ ರಸ್ತೆ ನಿಯಮಗಳ ಬಗ್ಗೆ ಪ್ರಶ್ನೋತ್ತರ ಕಾರ್ಯಕ್ರಮವನ್ನು ನಡೆಸಿ ಸರಿಯಾಗಿ ಉತ್ತರ ನೀಡಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಹಾವು ಏಣಿ ಆಟವಾಡಿಸುವುದರ ಮೂಲಕ ರಸ್ತೆ ಅಪಘಾತವಾಗದಂತೆ ತಡೆಯಬಹುದಾದ ಕ್ರಮಗಳನ್ನು ಚಟುವಟಿಕೆಗಳ ಮೂಲಕ ವಿವರಿಸಿದರು.

ಶಾಲೆಯ ಆಡಳಿತಾಧಿಕಾರಿ ಡಾ. ಹೆಚ್.ಎನ್.ಚಂದ್ರಶೇಖರ್ ಅವರು ರಸ್ತೆ ಸುರಕ್ಷತೆ ಪ್ರತಿಯೊಬ್ಬರ ಜವಾಬ್ದಾರಿ, ರಸ್ತೆ ನಿಯಮಗಳನ್ನು ಪಾಲಿಸಬೇಕು ಮತ್ತು ಸಂಚರಿಸುವಾಗ ಜಾಗರೂಕರಾಗಿರಬೇಕೆಂದು ಮಕ್ಕಳಿಗೆ ತಿಳಿಸಿದರು. ಶಾಲೆಯ ಕಾರ್ಯದರ್ಶಿ ಮಮತಾ ಚಂದ್ರಶೇಖರ್ ಹಾಗೂ ಇತರರಿದ್ದರು.

# ಡಿ. 28ರಿಂದ 3 ದಿನ 5ನೇ ವೈಜ್ಞಾನಿಕ ಸಮ್ಮೇಳನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**




ಹಾಸನ: ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ವತಿಯಿಂದ ಡಿ. 28 ರಿಂದ 30ರ ವರೆಗೆ ಯಾದಗಿರಿಯಲ್ಲಿ 3 ದಿನಗಳ 5ನೇ ರಾಜ್ಯ ಮಟ್ಟದ ವೈಜ್ಞಾನಿಕ ಸಮ್ಮೇಳನ ಆಯೋಜಿಸಿದ್ದು, ಜಿಲ್ಲೆಯ ಇಬ್ಬರು ಗಣ್ಯರಿಗೆ ರಾಜ್ಯ ಮಟ್ಟದ ಪ್ರತಿಷ್ಠಿತ ಪ್ರಶಸ್ತಿ ಲಭಿಸಿವೆ ಎಂದು ಪರಿಷತ್ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಡಿ. 28 ರಿಂದ ಮೂರು ದಿನ ನಡೆಯಲಿರುವ ಮಹತ್ವದ ಸಮ್ಮೇಳನಕ್ಕೆ ರಾಜ್ಯದ ನಾನಾ ಭಾಗಗಳಿಂದ 2 ಲಕ್ಷಕ್ಕೂ ಅಧಿಕ ಜನರು ಭಾಗವಹಿಸುವ ನಿರೀಕ್ಷೆಯಿದೆ. ಜಿಲ್ಲೆಯಿಂದಲೂ ಪರಿಷತ್ತಿನ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ತೆರಳಲಿದ್ದಾರೆ ಎಂದರು.

ಸಮ್ಮೇಳನದಲ್ಲಿ ಜಿಲ್ಲೆಯ ಹಿರಿಯ ವಕೀಲ ಹಾಗೂ ರಂಗ ಕಲಾವಿದರಾದ ಕೆ.ವಿ.ಯೋಗೀಶ್ ಅವರಿಗೆ ವಿಜ್ಞಾನ ಚಿಂತನೆ ಹಾಗೂ ಸಮಾಜ ಸೇವೆಗೆ ನೀಡುವ ರಾಜ್ಯ ಮಟ್ಟದ ಪ್ರತಿಷ್ಠಿತ ಎಚ್.ಎನ್. ನರಸಿಂಹಯ್ಯ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ಅದೇ ರೀತಿ ಶೈಕ್ಷಣಿಕ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಎನ್ ಎಸ್ ಎಸ್ ಅಧಿಕಾರಿ ನಿಚಿತಾ ಕುಮಾರಿ ಅವರಿಗೆ ಚೈತನ್ಯ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಮಾಹಿತಿ ನೀಡಿದರು. ಇತ್ತೀಚೆಗೆ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಡಾ. ಹುಲಿಕಲ್ ನಟರಾಜು ಅವರ ಅಧ್ಯಕ್ಷತೆಯಲ್ಲಿ ದೊಡ್ಡಬಳ್ಳಾಪುರದಲ್ಲಿ ಆಯೋಜಿಸಲಾಗಿದ್ದ ಟೆಲಿಸ್ಕೋಪ್ ತಯಾರಿಕಾ ತರಬೇತಿಯಲ್ಲಿ ಜಿಲ್ಲೆಯ ಅನೇಕ ಮಕ್ಕಳು ಭಾಗವಹಿಸಿದ್ದರು.

ಮಾರ್ಚ್ ಅಥವಾ ಏಪ್ರಿಲ್‌ನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಂದ 1 ಲಕ್ಷ ಮಕ್ಕಳನ್ನು ಒಗ್ಗೂಡಿಸಿ ಬೇಲೂರಿನ ಪುಷ್ಪಗಿರಿ ಮಠದಲ್ಲಿ ಬೃಹತ್ ವೈಜ್ಞಾನಿಕ ಹಾಗೂ ಮೌಲ್ಯಾಧಾರಿತ ಕಾರ್ಯಕ್ರಮ ಆಯೋಜಿಸಲು ಸಿದ್ಧತೆ ಕೈಗೊಳ್ಳಲಾಗಿದೆ. ಈ ಮಹತ್ವದ ಕಾರ್ಯಕ್ರಮಕ್ಕೆ ರಾಷ್ಟ್ರಪತಿ ಅವರನ್ನು ಆಹ್ವಾನಿಸಲಾಗಿದ್ದು, ಅವರು ದಿನಾಂಕ ಗೊತ್ತುಪಡಿಸಿದ ಬಳಿಕ ಮುಂದಿನ ತಯಾರಿ ಮಾಡಿಕೊಳ್ಳಲಾಗುವುದು ಎಂದರು.

ವಕೀಲರ ಸಂಘದ ಅಧ್ಯಕ್ಷ ಮೋಗಣ್ಣಗೌಡ ಹಾಗೂ ಮಾಜಿ ಅಧ್ಯಕ್ಷ ಜೆ.ಪಿ.ಶೇಖರ್ ಮಾತನಾಡಿ, ವೈಜ್ಞಾನಿಕ ಸಂಶೋಧನಾ ಪರಿಷತ್ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವುದರ ಜೊತೆಗೆ ಮೌಲ್ಯಾಧಾರಿತ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುತ್ತಿದ್ದು, ಇಂತಹ ಚಟುವಟಿಕೆಗಳಿಗೆ ಸಂಪೂರ್ಣ ಸಹಕಾರ ನೀಡಲಾಗುವುದು. ಮಕ್ಕಳು, ಸಾರ್ವಜನಿಕರಲ್ಲಿಯೂ ವಿಜ್ಞಾನದ ಅರಿವು ಹೆಚ್ಚಿಸುವುದು ಅತ್ಯಂತ ಅಗತ್ಯ ಎಂದು ಅಭಿಪ್ರಾಯಪಟ್ಟರು.

ಸುದ್ದಿಗೋಷ್ಠಿಯಲ್ಲಿ ಪರಿಷತ್ತಿನ ಪದಾಧಿಕಾರಿಗಳಾದ ಜಿ.ಆರ್. ಶ್ರೀನಿವಾಸ್, ನಂದಿನಿ, ಕುಮಾರ್, ನಾಯಕರಹಳ್ಳಿ ಮಂಜೇಗೌಡ, ಚೈತ್ರ ನಾಯಕಹಳ್ಳಿ, ರಾಣಿ ಇತರರಿದ್ದರು.

# ರಾಷ್ಟ್ರೀಯ ಫಿನ್ ಸ್ವಿಮ್ಮಿಂಗ್ ಸ್ಪರ್ಧೆ ಹಾಸನ ವಿದ್ಯಾರ್ಥಿಗಳ ಸಾಧನೆ





**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಮಂಗಳೂರಿನಲ್ಲಿ ಇತ್ತೀಚೆಗೆ ನಡೆದ 5ನೇ ರಾಷ್ಟ್ರೀಯ ಫಿನ್-ಸ್ವಿಮ್ಮಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಜಿಲ್ಲೆಗೆ ಮೂರು ಚಿನ್ನದ ಪದಕ ಲಭಿಸಿದ್ದು ವಿದ್ಯಾರ್ಥಿಗಳು ಪಾರುಪತ್ಯ ಮೆರೆದಿದ್ದಾರೆ.

ಸ್ವಿಮ್ಮಿಂಗ್ ಸ್ಪರ್ಧೆಯಲ್ಲಿ ಫಿನ್-ಸ್ವಿಮ್ಮಿಂಗ್ ಎನ್ನುವುದು ವಿಭಿನ್ನ ಮಾದರಿಯ ಆಟವಾಗಿದೆ. ಸುಮಾರು 50 ಮೀಟರ್ ವರೆಗೆ ತಲೆ ಎತ್ತದೆ ನೀರಿನಲ್ಲೇ ಮುಳುಗಿ ಸಾಗುವ ಕ್ರೀಡೆಯಲ್ಲಿ ಸಾಧನೆ ಮಾಡುವುದು ಅಪರೂಪ. ಅಂತಹ ಸಾಧನೆಗೆ ಹಾಸನದ ದೇಶಾ ಪಿ.ಶೆಟ್ಟಿ ಹಾಗೂ ಮೋಹಕ್ ಪಿ. ಗೌಡ ಚಿನ್ನದ ಪದಕ ಪಡೆದರೆ ಸಿ. ಕಿಂತನ್ ಮೂರನೇ ಸ್ಥಾನ (ಬ್ರಾಂಜ್ ಪದಕ) ಪಡೆದಿದ್ದಾರೆ. ಹಾಸನದಿಂದ ಒಟ್ಟು 7 ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಡಿ. 19 ರಿಂದ 23ರ ವರೆಗೆ ಮಂಗಳೂರಿನ ಯೆಮ್ಮೆಕೆರೆ ಅಂತಾರಾಷ್ಟ್ರೀಯ ಈಜುಕೊಳದಲ್ಲಿ 5ನೇ ಫಿನ್-ಸ್ವಿಮ್ಮಿಂಗ್ ಚಾಂಪಿಯನ್ ಶಿಪ್ ನಡೆಯಿತು. ಪಶ್ಚಿಮ ಬಂಗಾಳ ತಂಡ ಅತ್ಯುತ್ತಮ ಪ್ರದರ್ಶನ ನೀಡಿದ್ದು, 165 ಪದಕ ಪಡೆದರೆ ಕರ್ನಾಟಕ 62 ಪದಕಗಳನ್ನು ತನ್ನದಾಗಿಸಿಕೊಂಡಿದೆ. ಅದರಲ್ಲಿ ಹಾಸನಕ್ಕೆ ಮೂರು ಪದಕಗಳು ಬಂದಿವೆ.

ಹಾಸನದ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಕಳೆದ ಮೂರು ತಿಂಗಳಿಂದ ರಾಷ್ಟ್ರೀಯ ಫಿನ್-ಸ್ವಿಮ್ಮಿಂಗ್ ಸ್ಪರ್ಧೆಗಾಗಿ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿತ್ತು. ಈಜು ತರಬೇತುದಾರ ಕಿರಣ್‌ಕುಮಾರ್ ಅವರು ನಿತ್ಯ ಮಕ್ಕಳಿಗೆ ತರಬೇತಿ ನೀಡಿದ್ದರು. ಅಂತಿಮವಾಗಿ ಧನುಷ್ ಎಸ್. ಭಾರದ್ವಾಜ್, ಕೊಹಿಲ್ ಕೆ.ರಾವ್, ದೇಶ್ನಾ ಪಿ. ಶೆಟ್ಟಿ, ಸಿ.ಕಿಂತನ್, ರಿಷಿಕೇಶಗೌಡ, ನಮಂತ್‌ಗೌಡ ಹಾಗೂ ಮೋಹಕ್ ಪಿ. ಗೌಡ ಭಾಗವಹಿಸಿದ್ದರು. ಅದರಲ್ಲಿ ಧನುಷ್ ಹಾಗು ದೇಶ್ನಾ ಪಿಯುಸಿ ವಿದ್ಯಾರ್ಥಿಗಳಾಗಿದ್ದರೆ ಉಳಿದವರೆಲ್ಲಾ ಇನ್ನೂ ಪ್ರೌಢ ಶಾಲೆಯಲ್ಲಿ ಓದುತ್ತಿದ್ದಾರೆ. ಫಿನ್-ಸ್ವಿಮ್ಮಿಂಗ್ ಸ್ಪರ್ಧೆಯಲ್ಲಿ ಜಿಲ್ಲೆಯಿಂದ ಇದೇ ಮೊದಲ ಬಾರಿಗೆ ಸ್ಪರ್ಧೆ ಮಾಡಿದ್ದು ಚಿನ್ನದ ಪದಕ ದೊರೆತಿರುವುದು ಸಂತಸ ಮೂಡಿಸಿದೆ.

ಈಜು ಸ್ಪರ್ಧೆ ಎಂದರೆ ನೀರಿನಲ್ಲಿ ಮುಂದೆ ಸಾಗುವುದು ಎಂಬುದು ಸಾಮಾನ್ಯ ಪ್ರಕ್ರಿಯೆ. ಆದರೆ ಈ ಆಟ ಅದಕ್ಕಿಂತ ವಿಭಿನ್ನ ಹಾಗೂ ಕಠಿಣವಾಗಿರುತ್ತದೆ. ಉಸಿರಾಟಕ್ಕೆ ಸಮಸ್ಯೆಯಾಗದಂತೆ ಸ್ನಾರ್ಕಲ್ ಧರಿಸಿರಬೇಕು. ಸ್ವಿಮ್ಮಿಂಗ್ ಸೂಟ್, ಗಾಗಲ್ಸ್ ಹಾಕಬೇಕಾಗುತ್ತದೆ. ಮೋನೊಫಿನ್ಸ್ ಹಾಗೂ ಬಿ-ಫಿನ್ಸ್ ಎಂಬ ವಿಭಾಗದಲ್ಲಿ ಕಾಲಿಗೆ ರೆಕ್ಕೆಗಳನ್ನು ಕಟ್ಟಿಕೊಂಡು ಈಜಬೇಕಾಗುತ್ತದೆ. ಇದು ಮಕ್ಕಳಿಗೆ ಅತ್ಯಂತ ಕಠಿಣ ಸವಾಲಾಗಿರುತ್ತದೆ. ಹಿರಿಯರು ಅಂದಾಜು 18 ರಿಂದ 19 ಸೆಕೆಂಡ್‌ಗಳಲ್ಲಿ 50 ಮೀಟರ್ ಗುರಿ ತಲುಪಿದರೆ ಮಕ್ಕಳು 23 ಸೆಕೆಂಡ್ ಸಮಯ ತೆಗೆದುಕೊಳ್ಳುತ್ತಾರೆ.

ಫಿನ್-ಸ್ವಿಮ್ಮಿಂಗ್ ದೇಹಕ್ಕೆ ಒಳ್ಳೆಯ ವ್ಯಾಯಾಮ ಆಗಿರುವುದರಿಂದ ಹೆಚ್ಚು ಜನರು ಈ ಕ್ರೀಡೆಯತ್ತ ಆಸಕ್ತಿ ತೋರುತ್ತಿದ್ದಾರೆ. ದೇಹದ ಸ್ಥೈರ್ಯ ಮತ್ತು ತಾಳ್ಮೆ, ಕಾಲು ಮತ್ತು ಸ್ನಾಯುಗಳ ಬಲ, ಏಕಾಗ್ರತೆ ಮತ್ತು ಆತ್ಮವಿಶ್ವಾಸ ವೃದ್ಧಿಗೆ ಫಿನ್-ಸ್ವಿಮ್ಮಿಂಗ್ ಸಹಕಾರಿಯಾಗಿದೆ.

# ಸೆಸ್ಕ್ ವಿರುದ್ಧ ವಿದ್ಯುತ್ ಗುತ್ತಿಗೆದಾರರ ಪ್ರತಿಭಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಸಕಲೇಶಪುರ: ಪಟ್ಟಣದ ಸೆಸ್ಕ್ ಕಚೇರಿಯಲ್ಲಿ ಭ್ರಷ್ಟಾಚಾರ ಮಿತಿ ಮೀರಿದ್ದು ಅಗತ್ಯ ಮಾಹಿತಿ ನೀಡದೆ ವಿದ್ಯುತ್ ಗುತ್ತಿಗೆದಾರರಿಗೆ ನಿತ್ಯ ತೊಂದರೆ ನೀಡಲಾಗುತ್ತಿದೆ ಎಂದು ಆರೋಪಿಸಿ ವಿದ್ಯುತ್ ಗುತ್ತಿಗೆದಾರರು ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ವಿದ್ಯುತ್ ಗುತ್ತಿಗೆದಾರರ ಸಂಘದ ಅಧ್ಯಕ್ಷ ಪ್ರೇಮ್‌ನಾಥ ಮಾತನಾಡಿ, ವಿಸ್ತಾರವಾದ ತಾಲೂಕು ಆಗಿರುವ ಸಕಲೇಶಪುರದಲ್ಲಿ ದೂರದ ಊರುಗಳಿಂದ ವಿದ್ಯುತ್ ಸಂಪರ್ಕ ಪಡೆಯಲು ಆಗಮಿಸುವ ಗ್ರಾಹಕರಿಗೆ ಕಚೇರಿಯಲ್ಲಿ ಸರಿಯಾದ ಮಾಹಿತಿ ನೀಡದೆ ತೊಂದರೆ ಕೊಡಲಾಗುತ್ತಿದೆ. ತಾಲೂಕಿಗೆ ಎಐಟಿ ಹುದ್ದೆ ಮಜೂಂರು ಆಗಿದ್ದರೂ ಅವರನ್ನು ಬೇರೆ ಕಡೆ ಕಳುಹಿಸಲಾಗಿದೆ. ಇಲ್ಲಿ ಗುತ್ತಿಗೆದಾರರಿಗೆ ಇಲ್ಲಸಲ್ಲದ ಕಾರಣ ಹೇಳಿ ಸಂಪರ್ಕ ನೀಡಲು ನಿರಾಕರಣೆ ಮಾಡಲಾಗುತ್ತಿದೆ. ಹೊಸ ವಿದ್ಯುತ್ ಸಂಪರ್ಕ ಪಡೆಯಲು 2 ತಿಂಗಳು ಕಾದರೂ ಸಾಧ್ಯವಾಗುತ್ತಿಲ್ಲ ಎಂದು ಆರೋಪಿಸಿದರು. ಇಲಾಖೆಯಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು ಇಲಾಖೆಯಲ್ಲಿ ಕೆಲ ನೌಕರರೇ ವಿದ್ಯುತ್ ಗುತ್ತಿಗೆ ಕೆಲಸ ನಿರ್ವಹಣೆ ಮಾಡುತ್ತಿದ್ದಾರೆ. ಅದರಿಂದ ವಿದ್ಯುತ್ ಗುತ್ತಿಗೆದಾರರಿಗೆ ಸಂಕಷ್ಟ ಎದುರಾಗಿದೆ ಎಂದು ಆರೋಪಿಸಿದರು.

ಕಚೇರಿಯಲ್ಲಿ ವಿದ್ಯುತ್ ಸಂಪರ್ಕಕ್ಕೆ ಸಂಬಂಧಿಸಿ ಸರಿಯಾದ ಮಾಹಿತಿ ಕಚೇರಿಯಲ್ಲಿ ಲಭ್ಯವಿಲ್ಲದೆ ಕೆಲಸ ನಿರ್ವಹಿಸಲು ಅಸಾಧ್ಯವಾಗುತ್ತಿದೆ. ಸಕಲೇಶಪುರ ಉಪವಿಭಾಗಕ್ಕೆ ಸೂಕ್ತ ಎಐಟಿ ಅಧಿಕಾರಿಯನ್ನು ನೇಮಿಸಬೇಕು. ಇಲ್ಲದಿದ್ದಲ್ಲಿ ಕೆಇಆರ್‌ಸಿ ಸುತ್ತೋಲೆ ವಿವರಗಳನ್ನು ಕಚೇರಿ ಫಲಕದಲ್ಲಿ ಲಗತ್ತಿಸಿ ಸಾರ್ವಜನಿಕರಿಗೆ ಹಾಗೂ ಗುತ್ತಿಗೆದಾರರಿಗೆ ಮಾಹಿತಿ ಲಭ್ಯವಾಗುವಂತೆ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

ಸೆಸ್ಕ್ ಕಚೇರಿಯಲ್ಲಿ ಯಾವ ವಿದ್ಯುತ್ ಸಂಪರ್ಕಕ್ಕೆ ಸಂಬಂಧಿಸಿದ ಸರಿಯಾದ ಮಾಹಿತಿ ದೊರೆಯದ ಕಾರಣ ವಿದ್ಯುತ್ ಗುತ್ತಿಗೆದಾರರಿಗೆ ದಿನನಿತ್ಯ ತೊಂದರೆ ಉಂಟಾಗುತ್ತಿದೆ. ಈ ಸಮಸ್ಯೆಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಿ ತಕ್ಷಣ ಸೂಕ್ತ ಕ್ರಮ ಕೈಗೊಳ್ಳುವಂತೆ ಗುತ್ತಿಗೆದಾರರು ಕಚೇರಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಗುತ್ತಿಗೆದಾರರ ಸಂಘದ ಉಪಾಧ್ಯಕ್ಷ ಸೋಮಶೇಖರ್, ಕಾರ್ಯದರ್ಶಿ ಧರ್ಮೆಂದ್ರ ಶೆಟ್ಟಿ, ರಫಿಕ್ , ಮೋಹನ್ ಕುಮಾರ್ ಹಾಗೂ ಇತರರಿದ್ದರು.

# ದೀಪು ಚಂದ್ರದಾಸ್ ಹತ್ಯೆ ಖಂಡಿಸಿ ಪ್ರತಿಭಟನೆ: ಸಾರ್ವಜನಿಕರ ಬೆಂಬಲ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಬಾಂಗ್ಲಾದೇಶದಲ್ಲಿ ಹಿಂದು ಯುವಕ ದೀಪು ಚಂದ್ರದಾಸ್ ಹತ್ಯೆ ಖಂಡಿಸಿ ವಿಶ್ವ ಹಿಂದು ಪರಿಷತ್ ಹಾಗೂ ಭಜರಂಗದಳ ಕಾರ್ಯಕರ್ತರು ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು. ನಗರದ ಹೇಮಾವತಿ ಪ್ರತಿಮೆಯಿಂದ ಮೆರವಣಿಗೆಯಲ್ಲಿ ಬಂದ ಪ್ರತಿಭಟನಾಕಾರರು ಎನ್.ಆರ್. ವೃತ್ತದಲ್ಲಿ ಮಾನವ ಸರಪಳಿ ರಚಿಸಿ ನಂತರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಪ್ರತಿಭಟನೆ ಹಿನ್ನೆಲೆಯಲ್ಲಿ ಎನ್.ಆರ್. ವೃತ್ತದ ಸುತ್ತಮುತ್ತ ಇರುವ ಅಂಗಡಿ ಮುಂಗಟ್ಟುಗಳನ್ನು ಕೆಲ ಕಾಲ ಮುಚ್ಚಿಸಲಾಯಿತು. ಹಿಂದು ಯುವಕನ ಹತ್ಯೆ ಖಂಡಿಸಿ ವ್ಯಾಪಾರಿಗಳು ಸ್ವಯಂ ಪ್ರೇರಿತವಾಗಿ ಬಾಗಿಲು ಹಾಕುವ ಮೂಲಕ ಬೆಂಬಲ ಸೂಚಿಸಿದರು.

ವಿಶ್ವ ಹಿಂದು ಪರಿಷತ್ ಜಿಲ್ಲಾ ಸಂಯೋಜಕ ಅಭಿಷೇಕ್ ಮಾತನಾಡಿ, ದೀಪು ಚಂದ್ರದಾಸ್ ಅವರನ್ನು ಕ್ರೂರವಾಗಿ ಹತ್ಯೆ ಮಾಡಿ, ಸಾರ್ವಜನಿಕವಾಗಿ ಮರಕ್ಕೆ ನೇಣು ಹಾಕಿ ಬೆಂಕಿ ಹಚ್ಚಲಾಗಿದೆ. ಈ ಘಟನೆ ಕೇವಲ ಹತ್ಯೆಯಲ್ಲ, ಹಿಂದೂ ಸಮಾಜವನ್ನು ಭಯಭೀತಿಗೊಳಿಸುವ ಸಂಚಾಗಿದೆ ಎಂದರು.

ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದ ಮಾನವ ನರಮೇಧಕ್ಕೆ ಮುನ್ಸೂಚನೆಯಾಗುವಂತಹ ಆತಂಕಕಾರಿ ಬೆಳವಣಿಗೆಯಾಗಿದೆ. ಕಳೆದ ಎರಡು ವರ್ಷಗಳಿಂದ ಬಾಂಗ್ಲಾದೇಶದಲ್ಲಿ ಹಿಂದು ಅಲ್ಪಸಂಖ್ಯಾತರ ಮೇಲೆ ನಿರಂತರವಾಗಿ ದೌರ್ಜನ್ಯ, ಹತ್ಯೆ ಹಾಗೂ ಹಿಂಸೆ ನಡೆಯುತ್ತಿದೆ ಎಂದರು. ಈ ರೀತಿಯ ಕ್ರೂರ ಕೃತ್ಯಗಳು ಅಂತಾರಾಷ್ಟ್ರೀಯ ಮಾನವ ಹಕ್ಕುಗಳಿಗೆ ವಿರುದ್ಧವಾಗಿದ್ದು, ವಿಶ್ವ ಸಂಸ್ಥೆ ಈ ವಿಚಾರದಲ್ಲಿ ಮೌನ ವಹಿಸಿರುವುದು ದುರಂತ. ಬಾಂಗ್ಲಾದೇಶದಲ್ಲಿರುವ ಹಿಂದೂಗಳ ಜೀವ ಮತ್ತು ಆಸ್ತಿ ರಕ್ಷಣೆಗೆ ಭಾರತ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಈ ಕೂಡಲೇ ಬಾಂಗ್ಲಾದೇಶದ ಹಿಂದುಗಳ ರಕ್ಷಣೆಗೆ ಮುಂದಾಗಿ, ಸಂಕಷ್ಟದಲ್ಲಿರುವವರಿಗೆ ಆಶ್ರಯ ನೀಡುವ ನಿಟ್ಟಿನಲ್ಲಿ ಭಾರತ ಬಾಂಗ್ಲಾ ಗಡಿಯನ್ನು ತೆರೆಯಬೇಕು. ಅಕ್ರಮವಾಗಿ ಭಾರತ ಪ್ರವೇಶಿಸಿರುವ ಬಾಂಗ್ಲಾದೇಶದ ಅಲ್ಪಸಂಖ್ಯಾತ ವಲಸಿಗರ ವಿಚಾರದಲ್ಲಿ ಸರ್ಕಾರ ಸ್ಪಷ್ಟ ನಿರ್ಧಾರ ಕೈಗೊಳ್ಳದಿದ್ದರೆ ಭಜರಂಗದಳ ನೇರ ಕಾರ್ಯಾಚರಣೆ ನಡೆಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

# ರಾಜ್ಯ ಕೋಳಿ ಸಾಕಾಣಿಕೆದಾರರ ಸಂಘಕ್ಕೆ ಚಂದ್ರಶೇಖರ್ ಅಧ್ಯಕ್ಷ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**



ಬೆಂಗಳೂರು: ಅಖಿಲ ಕರ್ನಾಟಕ ರಾಜ್ಯ ಕೋಳಿ ಸಾಕಾಣಿಕೆದಾರ ರೈತರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷರಾಗಿ ಹಾಸನ ಚಂದ್ರಶೇಖರ್ ಅವರು ಅವಿರೋಧ ಆಯ್ಕೆಯಾಗಿದ್ದಾರೆ.

ಬೆಂಗಳೂರಿನ ಕುಕ್ಕುಟ ಮಹಾಮಂಡಳಿ ಸಭಾಂಗಣದಲ್ಲಿ ಕೋಳಿ ಸಾಕಾಣಿಕೆ ರಾಜ್ಯ ರೈತರ ಸಭೆಯಲ್ಲಿ ನೂತನ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆಯಾಗಿದ್ದು ಗೌರವಾಧ್ಯಕ್ಷರಾಗಿ ಹೊಸಕೋಟೆಯ ಮಾರಣ್ಣ, ಕಾರ್ಯಾಧ್ಯಕ್ಷರಾಗಿ ಚಿಕ್ಕಬಳ್ಳಾಪುರದ ನಂಜುಂಡಪ್ಪ, ಉಪಾಧ್ಯಕ್ಷರಾಗಿ ರಾಜಶೇಖರ್ ಆನೇಕಲ್, ಪ್ರಧಾನ ಕಾರ್ಯದರ್ಶಿಯಾಗಿ ಕೋಯಿರಾ ಮಂಜುನಾಥ್, ಉಪಾಧ್ಯಕ್ಷರಾಗಿ ಚಿಕ್ಕಮಗಳೂರಿನ ಪ್ರಕಾಶ್ ನಾಯಕ್, ರಾಮನಗರದಿಂದ ಕುಮಾರಸ್ವಾಮಿ, ಮಂಡ್ಯದಿಂದ ಧನಂಜಯ್, ನೆಲಮಂಗಲದಿಂದ ನಿತಿನ್, ಸಹಕಾರ್ಯದರ್ಶಿಯಾಗಿ ಹೊಸಕೋಟೆಯಿಂದ ವಸಂತ ಮತ್ತಿತರರು ಆಯ್ಕೆಯಾಗಿದ್ದಾರೆ.

ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾದ ಚಂದ್ರಶೇಖರ್ ಮಾತನಾಡಿ, ಮುಂದಿನ ಹೋರಾಟದ ರೂಪು ರೇಷೆಗಳ ಬಗ್ಗೆ ರಾಜ್ಯದ ಸಂಘದ ಪದಾಧಿಕಾರಿಗಳ ಒಟ್ಟಿಗೆ ಸಾಕಾರದೊಂದಿಗೆ ಹೋರಾಟದ ರೂಪ ರೇಷೆಗಳನ್ನು ರೂಪಿಸಿ ರಾಜ್ಯದ ಕೋಳಿ ಸಾಕಾಣಿಕ ರೈತರಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಸರ್ಕಾರದೊಂದಿಗೆ ಚರ್ಚಿಸಿ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಕೆಲಸ ಮಾಡುತ್ತೇವೆ. ಸರ್ಕಾರದ ಮಟ್ಟದಲ್ಲಿ ಆಗದ ಕಾಲದಲ್ಲಿ ರಾಜ್ಯದ ರೈತರ ಸಹಕಾರದೊಂದಿಗೆ ಉಗ್ರ ಹೋರಾಟ ನಡೆಸಿ ರೈತರ ಸಮಸ್ಯೆಗಳನ್ನ ಸಾಕಾರಗೊಳಿಸುವಲ್ಲಿ ಯಶಸ್ವಿಯಾಗುತ್ತೇನೆಂದು ರಾಜ್ಯದ ರೈತರಿಗೆ ಭರವಸೆ ನೀಡಿದ್ದಾರೆ.

